# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಯಚೂರು ಜಿಲ್ಲೆಯ ರಾಯಚೂರು ಮತ್ತು ದೇವದುರ್ಗ ತಾಲ್ಲೂಕುಗಳಲ್ಲಿ ಜಲಾನಯನ ಅಭಿವೃದ್ಧಿ ಇಲಾಖಾ ವತಿಯಿಂದ ಅನುಷ್ಠಾನಗೊಳಿಸಿರುವ ಕಾಮಗಾರಿಗಳ ಪರಿಶೀಲನೆಯಲ್ಲಿ ಕಂಡು ಬಂದ ಲೋಪದೋಷಗಳಿಗೆ ಸಂಬಂಧಿಸಿದಂತೆ ಶಿಸ್ತು ಕ್ರಮ.

*****

**ಓದಲಾಗಿದೆ:-**

1. ಜಲಾನಯನ ಅಭಿವೃದ್ಧಿ ಆಯುಕ್ತರ ಪತ್ರ ಸಂ: ಜಅಇ/ಆಡಳಿತ-3/ವಿನಿ-12/15/11-12(ಭಾ-2)ದಿ:20-09-2013.
2. ಸರ್ಕಾರದ ಕಾರಣ ಕೇಳುವ ಸೂಚನಾ ಪತ್ರ ಸಂ. ಕೃತೋಇ 78 ಕೃಪವಿ 2010, ದಿನಾಂಕ:14-02-2014.
3. ಶ್ರೀ ಗಂಗಾಧಾರ ಸ್ವಾಮಿ ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ ದೇವದುರ್ಗ ರಾಯಚೂರು ಜಿಲ್ಲೆ ಇವರ ಲಿಖಿತಹೇಳಿಕೆ ದಿ:03-03-2014.
4. ಶ್ರೀ ಬಂಗಾರಪ್ಪ, ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ ದೇವದುರ್ಗ ರಾಯಚೂರು ಜಿಲ್ಲೆ ಇವರ ಲಿಖಿತಹೇಳಿಕೆ ದಿ:03-03-2014.
5. ಶ್ರೀ ದೇವೇಶ, ಹಿಂದಿನ ಕೃಷಿ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ ರಾಯಚೂರು ಜಿಲ್ಲೆ ಇವರ ಲಿಖಿತಹೇಳಿಕೆ ದಿನಾಂಕ:07-03-2014.
6. ಶ್ರೀ ಡಿ. ಮಂಜಣ್ಣ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ ರಾಯಚೂರು ಇವರ ಲಿಖಿತ ಹೇಳಿಕೆ ದಿನಾಂಕ:27-03-2014.

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 20-09-2013ರ ಪತ್ರದಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಇವರು ರಾಯಚೂರು ಜಿಲ್ಲೆಯ ರಾಯಚೂರು ಮತ್ತು ದೇವದುರ್ಗ ತಾಲ್ಲೂಕುಗಳಲ್ಲಿ ಜಲಾನಯನ ಅಭಿವೃದ್ಧಿ ಇಲಾಖಾ ವತಿಯಿಂದ ಅನುಷ್ಠಾನಗೊಳಿಸಿರುವ ಕಾಮಗಾರಿಗಳು ಕಳಪೆ ಗುಣಮಟ್ಟದಾಗಿದ್ದು, ಸರ್ಕಾರಿ ಹಣ ದುರುಪಯೋಗವಾಗಿರುವ ಹಿನ್ನೆಲೆಯಲ್ಲಿ ಸದರಿ ಲೋಪಕ್ಕೆ ಕಾರಣರಾಗಿದ್ದಾರೆ ಎನ್ನಲಾದ ಕೆಳಕಂಡ ಅಧಿಕಾರಿ/ನೌಕರರ ಮೇಲೆ ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮಾವಳಿ ನಿಯಮ 11ರಡಿ ಶಿಸ್ತುಕ್ರಮಕ್ಕೆ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ.

1) ಶ್ರೀ ಡಿ. ಮಂಜಣ್ಣ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ರಾಯಚೂರು.
2) ಶ್ರೀ ಎಸ್. ಬಂಗಾರಪ್ಪ, ಹಿಂದಿನ ಕೃಷಿ ಅಧಿಕಾರಿ, ದೇವದುರ್ಗ, ಹಾಗೂ ಪ್ರಭಾರಿ ಕೃಷಿ ಅಧಿಕಾರಿ.
3) ಶ್ರೀ ಗಂಗಾಧರ ಸ್ವಾಮಿ, ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ(ಈಗ ನಿವೃತ್ತ).
4) ಶ್ರೀ ದೇವೇಶ, ಕೃಷಿ ಸಹಾಯಕ ಜಲಾನಯನ ಅಭಿವೃದ್ಧಿ ಇಲಾಖೆ ರಾಯಚೂರು

--2--

ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ರವರ ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರ ಮೇಲ್ಕಂಡ ಅಧಿಕಾರಿ/ನೌಕರರು ಎಸಗಿದ ಆರೋಪಗಳಿಗೆ ಸಂಬಂಧಿಸಿದಂತೆ ಸೇವೆಯಲ್ಲಿರುವ ಅಧಿಕಾರಿ/ನೌಕರರಿಗೆ ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ.)ನಿಯಮಾವಳಿ 1957ರ ನಿಯಮ 11ರಡಿ ಹಾಗೂ ನಿವೃತ್ತರಾದವರ ಮೇಲೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 214ರಡಿ ಕಾರಣ ಕೇಳುವ ಪತ್ರವನ್ನು ಆಪಾದನಾ ಪಟ್ಟಿಯೊಂದಿಗೆ ಅನುಬಂಧ 1 ರಿಂದ 4ರಲ್ಲಿ ಮೇಲೆ ಕ್ರಮಾಂಕ (2)ರಲ್ಲಿ ಓದಲಾಗಿರುವ ಪತ್ರದಲ್ಲಿ ಜಾರಿಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ 3 ರಿಂದ 06ರಲ್ಲಿ ಓದಲಾದ ಪತ್ರಗಳಲ್ಲಿ ಲೋಪ ಎಸಗಿರುತ್ತಾರೆಂದು ಆರೋಪಿಸಲಾದ ಅಧಿಕಾರಿಗಳು ತಮ್ಮ ಮೇಲಿನ ಆರೋಪಗಳಿಗೆ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ, ತಮ್ಮ ಮೇಲಿರುವ ಆರೋಪಗಳನ್ನು ಅಲ್ಲಗೆಳೆದಿರುತ್ತಾರೆ. ಸದರಿ ಅಧಿಕಾರಿಗಳು ತಮ್ಮ ಮೇಲಿನ ಆರೋಪಗಳಿಗೆ ಸಂಬಂಧಿಸಿದಂತೆ ಸಲ್ಲಿಸಿರುವ ಲಿಖಿತ ಹೇಳಿಕೆಯನ್ನು ಅವರ ಮೇಲಿನ ಆರೋಪಗಳೊಂದಿಗೆ ತುಲನೆ ಮಾಡಿದಾಗ ಅವರ ಹೇಳಿಕೆಗಳಲ್ಲಿ ಒಪ್ಪಬಹುದಾದ ಅಂಶಗಳು ವ್ಯಕ್ತವಾಗಿರುವುದಿಲ್ಲ. ಆದ್ದರಿಂದ ಸದರಿ ಆರೋಪಗಳ ಬಗ್ಗೆ ಸತ್ಯಾ-ಸತ್ಯತೆಯನ್ನು ತಿಳಿದುಕೊಳ್ಳುವ ಸಲುವಾಗಿ ಈ ಪ್ರಕರಣವನ್ನು ಇಲಾಖಾ ವಿಚಾರಣೆಗೆ ಗುರಿಪಡಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಕೃತೋಇ 57 ಕೃಪವಿ 2011</u>**
**<u>ಬೆಂಗಳೂರು, ದಿನಾಂಕ: 27-06-2014.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಈ ಕೆಳಕಂಡ ಅಧಿಕಾರಿಗಳು ಎಸಗಿರುವ ಆರೋಪಗಳಿಗೆ ಸಂಬಂಧಿಸಿದಂತೆ, ಅವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 214ನ್ನು ಓದುವುದರೊಂದಿಗೆ ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮಾವಳಿ 1957ರ ನಿಯಮ 11ರಡಿ ನಿರೂಪಿಸಿರುವಂತೆ ಇಲಾಖಾ ವಿಚಾರಣೆ ನಡೆಸಲು, ಶ್ರೀ ಎಂ.ಜಿ ಹಿರೇಮಠ್, ನಿವೃತ್ತ ಜಿಲ್ಲಾ ಮತ್ತು ಸೇಶನ್ಸ್ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಶ್ರೀಮತಿ ನಿರ್ಮಲಾ ಹೆಚ್.ಆರ್ ಆಡಳಿತ ಸಹಾಯಕರು, ಜಲಾನಯನ ಅಭಿವೃದ್ಧಿ ಇಲಾಖೆ, ಆಯುಕ್ತರ ಕಚೇರಿ, ಬೆಂಗಳೂರು, ಇವರನ್ನು ಈ ಪ್ರಕರಣದಲ್ಲಿಯ ಮಂಡನಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

1) ಶ್ರೀ ಡಿ ಮಂಜಣ್ಣ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು,
ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು.

2) ಶ್ರೀ ಬಂಗಾರಪ್ಪ, ಹಿಂದಿನ ಸಹಾಯಕ ಕೃಷಿ ಅಧಿಕಾರಿ,
ಜಲಾನಯನ ಅಭಿವೃದ್ಧಿ ಇಲಾಖೆ, ದೇವದುರ್ಗ, ರಾಯಚೂರು ಜಿಲ್ಲೆ.

3) ಶ್ರೀ ಗಂಗಾಧಾರ ಸ್ವಾಮಿ, ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ದೇವದುರ್ಗ, ರಾಯಚೂರು ಜಿಲ್ಲೆ.

4) ಶ್ರೀ ದೇವೇಶ, ಹಿಂದಿನ ಕೃಷಿ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ, ರಾಯಚೂರು ಜಿಲ್ಲೆ.

ಪ್ರಕರಣದ ವಿಚಾರಣೆಯನ್ನು ಮೂರು ತಿಂಗಳೊಳಗಾಗಿ ಮುಗಿಸಿ ವರದಿಯನ್ನು ಸಲ್ಲಿಸುವಂತೆ ಕೋರಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ:-

1) ಮಹಾಲೇಖಪಾಲರು (ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ ಜಿಇ-05), ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
3) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4) ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳು ರಾಯಚೂರು ಜಿಲ್ಲೆ.
5) ಶ್ರೀ ಎಂ.ಜಿ. ಹೀರೇಮಠ್ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ.746, 15ನೇ ಮೇನ್, ಜುಡಿಷಿಯಲ್ ಲೇಔಟ್, ಅಲ್ಲಾಳಸಂದ್ರ, ಜಿಕೆವಿಕೆ ಪೋಸ್ಟ್ ಬೆಂಗಳೂರು(ರಿಜಿಸ್ಟರ್ ಅಂಚೆ ಮೂಲಕ)
6) ಶ್ರೀಮತಿ ನಿರ್ಮಲಾ ಹೆಚ್.ಆರ್, ಆಡಳಿತ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ ಆಯುಕ್ತರ ಕಚೇರಿ, ಕಾವೇರಿ ಭವನ, ಬೆಂಗಳೂರು
7) ಸಹಾಯಕ ಕೃಷಿ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ ರಾಯಚೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
9) ಸರ್ಕಾರದ ಉಪ ಕಾರ್ಯದರ್ಶಿ-I, ಕೃಷಿ ಇಲಾಖೆ.
10) ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.